## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2017–18ನೇ ಸಾಲಿನ NRDWP ಕಾರ್ಯಕ್ರಮದಡಿ ಕೊಪ್ಪಳ ಜಿಲ್ಲೆ, ಕೊಪ್ಪಳ ತಾಲ್ಲೂಕಿನ ಹೆಚ್ಚುವರಿ ಕ್ರಿಯಾ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ರವರ ಕಡತ ಸಂ:ಗ್ರಾಅಪ 312 ಗ್ರಾಕುನೀ&ನೈಇ 2017–18.

--

**ಪೀಠಿಕೆ:**

ಮೇಲೆ ಓದಲಾದ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ರವರ ಕಡತದಲ್ಲಿ ಕೊಪ್ಪಳ ಜಿಲ್ಲೆ, ಕೊಪ್ಪಳ ತಾಲ್ಲೂಕಿನ ರೂ.262.50ಲಕ್ಷ ಅಂದಾಜಿನ 77 ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು 2017–18ರ ಸಾಲಿನ ಹೆಚ್ಚುವರಿ ಕ್ರಿಯಾ ಯೋಜನೆಗೆ NRDWP ಕಾರ್ಯಕ್ರಮದಡಿ ಅನುಮೋದನೆ ನೀಡುವ ಪ್ರಸ್ತಾವನೆ ಸಲ್ಲಿಸಿದ್ದಾರೆ. ಕೊಪ್ಪಳ ಜಿಲ್ಲಾ ಪಂಚಾಯತ್ ಹಾಗೂ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ರವರು ನಿಯಮಾನುಸಾರ ಮುಂದಿನ ಪ್ರಕ್ರಿಯೆ ಅನುಸರಿಸಲನುವಾಗುವಂತೆ ಉದ್ದೇಶಿತ ಯೋಜನೆಗೆ ರಾಜ್ಯವಲಯದ NRDWP (Coverage & Quality) ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಲು ಉದ್ದೇಶಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 01 ಗ್ರಾನೀಸ(1) 2018 ಬೆಂಗಳೂರು, ದಿನಾಂಕ:08.01.2018.**

ಪೀಠಿಕೆಯಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ, ಕೊಪ್ಪಳ ಜಿಲ್ಲೆ, ಕೊಪ್ಪಳ ತಾಲ್ಲೂಕಿನ 77 ಕುಡಿಯುವ ನೀರಿನ ಕಾಮಗಾರಿಗಳ ಅಂದಾಜು ಮೊತ್ತ **ರೂ.262.50ಲಕ್ಷ (ಎರಡು ನೂರ ಅರವತ್ತೆರಡು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ) ಗಳಿಗೆ** ರಾಜ್ಯ ವಲಯದ NRDWP(C&Q) ಕಾರ್ಯಕ್ರಮದಡಿ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಯೋಜನೆ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯ್ದೆಯನ್ವಯ) ನೀತಿಯನ್ವಯ ಮಾಡತಕ್ಕದ್ದು.

3. ಸದರಿ ಕಾಮಗಾರಿಗಳನ್ನು 2017–18ನೇ ಸಾಲಿನ ಹೆಚ್ಚುವರಿ ಕ್ರಿಯಾ ಯೋಜನೆಯಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು. ಇದಲ್ಲದೆ ಸದರಿ ಕಾಮಗಾರಿಗಳು ಹಿಂದಿನ ಸಾಲಿನ ಕ್ರಿಯಾ ಯೋಜನೆಗಳಲ್ಲಿ ಅಳವಡಿಸದಿರುವ ಕುರಿತು ಖಾತ್ರಿಪಡಿಸಿಕೊಳ್ಳತಕ್ಕದ್ದು.

4. ಈ ಆದೇಶದಲ್ಲಿ ಅನುಮೋದನೆಯಾಗಿರುವ ಕಾಮಗಾರಿಗಳಿಂದ ಕುಡಿಯುವ ನೀರಿನ ಸೌಲಭ್ಯವನ್ನು ಕಡ್ಡಾಯವಾಗಿ ಶೇ.25ರಷ್ಟು ಪರಿಶಿಷ್ಠ ಜಾತಿ / ಪರಿಶಿಷ್ಟ ವರ್ಗದ ಫಲಾನುಭವಿಗಳಿಗೆ / ಜನವಸತಿಗಳಲ್ಲಿ ಅನುಷ್ಠಾನಗೊಳಿಸತಕ್ಕದ್ದು.

5. ಕಾಮಗಾರಿಯ ಪ್ರಾರಂಭದಿಂದ ಅಂತ್ಯದವರೆವಿಗೂ ಭೌತಿಕ ಹಾಗೂ ಆರ್ಥಿಕ ಪ್ರಗತಿಯ ವಿವರಗಳನ್ನು IMISನಲ್ಲಿ ದಾಖಲಿಸಬೇಕೆಂಬ ಷರತ್ತನ್ನು ವಿಧಿಸಲಾಗಿದೆ.

6. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ IFA ರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ 145 ಎಎಫ್ಎನ್ 2017, ದಿನಾಂಕ:01.04.2017ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂ-1
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂ-1.
8. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆ.
9. ಸರ್ಕಾರದ ಆಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009.
11. ಅಧ್ಯಕ್ಷರು, ಜಿಲ್ಲಾ ಪಂಚಾಯತ್ **ಕೊಪ್ಪಳ,**
12. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, **ಕೊಪ್ಪಳ.**
13. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವೃತ್ತ ಕಛೇರಿ, ಕಲಬುರಗಿ.
14. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, **ಕೊಪ್ಪಳ.**
15. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್(TNMC), ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
16. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
17. ಆಯುಕ್ತರು ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ, **RDWSD** / ಆಂತರಿಕ ಆರ್ಥಿಕ ಸಕಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರುಗಳು ಆಪ್ತ ಸಹಾಯಕರು
18. ಮುಖ್ಯ ಲೆಕ್ಕಾಧಿಕಾರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.
19. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, **BWSSB Branch,** ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು-9.
20. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
21. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ **"ಕರ್ನಾಟಕ ವಿಕಾಸ"** ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
22. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
23. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
24. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ (10 ಪ್ರತಿಗಳು).
25. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.